**All India Radio: Bangalore**
**Regional Bulletin In Kannada**
**16.07.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**16.07.2025 / 6.40 p.m.**
**<><><><>**

ಮುಖ್ಯಾಂಶಗಳು :

1. ರಾಜ್ಯದಲ್ಲಿ ಬಂಡವಾಳ ಹೂಡಿಕೆ ವಿಸ್ತರಣೆ ಕುರಿತಂತೆ ರೋಲ್ಸ್ ರಾಯ್ ಕಂಪನಿ ಜೊತೆ ಸರ್ಕಾರ ಮಾತುಕತೆ
2. ರಾಜ್ಯದಲ್ಲಿ ಶೀಘ್ರವೇ ನೂತನ ಜೈವಿಕ ಇಂಧನ ನೀತಿ ಜಾರಿಗೆ - ಸಚಿವ ಪ್ರಿಯಾಂಕ್ ಖರ್ಗೆ
3. ಒಟ್ಟಾರೆ ಮೀಸಲಾತಿ ಶೇಕಡಾ ೫೦ರಿಂದ ೭೫ಕ್ಕೆ ಹೆಚ್ಚಿಸುವಂತೆ ಎಐಸಿಸಿ ಹಿಂದುಳಿದ ವರ್ಗಗಳ ಸಭೆಯಲ್ಲಿ ನಿರ್ಣಯ
4. ಖಾದಿಗೆ ಪರಿಣಾಮಕಾರಿ ಮಾರುಕಟ್ಟೆ ವ್ಯವಸ್ಥೆ ಒದಗಿಸುವಂತೆ ಅಧಿಕಾರಿಗಳಿಗೆ ಸಚಿವ ಶರಣಬಸಪ್ಪ ದರ್ಶನಾಪುರ ಸೂಚನೆ
5. ಮುಜರಾಯಿ ಇಲಾಖೆ ಸುಪರ್ದಿಗೆ ಬೆಂಗಳೂರಿನ ಗಾಳಿ ಆಂಜನೇಯ ದೇವಸ್ಥಾನ- ಸರ್ಕಾರದ ಪರ ಹೈಕೋರ್ಟ್ ತೀರ್ಪು

<><><><>

ಜಾಗತಿಕ ಮಟ್ಟದ ಅಗ್ರಗಣ್ಯ ಕಂಪನಿಗಳಲ್ಲಿ ಒಂದಾಗಿರುವ ಮತ್ತು ರಕ್ಷಣೆ ಹಾಗೂ ವೈಮಾಂತರಿಕ್ಷ ವಲಯದಲ್ಲಿ ಹೆಸರುವಾಸಿಯಾಗಿರುವ ರೋಲ್ಸ್ ರಾಯ್ಸ್ ಕಂಪನಿಯು ರಾಜ್ಯದಲ್ಲಿ ಬಂಡವಾಳ ಹೂಡಿಕೆ-ವಿಸ್ತರಣೆ ಕುರಿತಂತೆ ಇಂದು ಮಹತ್ವದ ಚರ್ಚೆ ನಡೆಸಿದೆ. ಭವಿಷ್ಯದ ಯೋಜನೆಗಳು ಮತ್ತು ತಂತ್ರಜ್ಞಾನ ಸೌಲಭ್ಯ ಕುರಿತು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಉನ್ನತ ಮಟ್ಟದ ನಿಯೋಗದ ಜತೆ ಮಾತುಕತೆ ನಡೆಸಿದ್ದಾರೆ. ರೋಲ್ಸ್ ರಾಯ್ಸ್ ನಿಯೋಗದಲ್ಲಿ ಜಾಗತಿಕ ಮಟ್ಟದ ನಿರ್ದೇಶಕ ಫಿಲ್ ಪ್ರೀಸ್ಟ್, ಭಾರತದಲ್ಲಿನ ವಾಣಿಜ್ಯ ವಿಭಾಗದ ಮುಖ್ಯಸ್ಥ ಟಾಮ್ ಕ್ಯಾಂಡ್ರಿಕಾಲ್, ರಕ್ಷಣಾ ವಿಭಾಗದ ಭಾರತದ ಮುಖ್ಯಸ್ಥೆ ಗಾಯತ್ರಿ ಶರ್ಮ ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ಸಚಿವ ಎಂ.ಬಿ.ಪಾಟೀಲ್ ಸಹಭಾಗಿತ್ವ ಹೆಚ್ಚಿಸಿಕೊಳ್ಳಲು ಕಂಪನಿಯ ಅಧಿಕಾರಿಗಳು ಒಲವು ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು. ಉದ್ದೇಶಿತ ಹೈಟೆಕ್ ರಕ್ಷಣಾ ಮತ್ತು ವೈಮಾಂತರಿಕ್ಷ ಪಾರ್ಕ್ ಸ್ಥಾಪನೆಗೆ ದೇವನಹಳ್ಳಿಯಲ್ಲಿ ಪ್ರಸ್ತಾವಿತ ಭೂಸ್ವಾಧೀನವನ್ನು ಸರಕಾರವು ಕೈಬಿಟ್ಟ ಮರುದಿನವೇ ಈ ಮಾತುಕತೆ ನಡೆದಿರುವುದು ಗಮನಾರ್ಹವಾಗಿದೆ.

<><><><>

ಭೂ ವಿವಾದದಿಂದ ರಾಜ್ಯದ ಯಾವುದೇ ಕೈಗಾರಿಕೆಗಳು ಸ್ಥಳಾಂತರಗೊಳ್ಳುವುದಿಲ್ಲ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು, ಭೂಮಿ ಕೊರತೆಯಿಂದ ಒಂದೇ ಒಂದು ಉದ್ಯಮವು ರಾಜ್ಯದಿಂದ ಹೊರ ಹೋಗುವುದಿಲ್ಲ. ದೇವನಹಳ್ಳಿ ಪ್ರದೇಶದಲ್ಲಿಯೂ ಭೂಮಿ ಲಭ್ಯವಿದ್ದು ಆಂಧ್ರಪ್ರದೇಶದ ಸಚಿವ ನಾರಾ ಲೋಕೇಶ್ ಆಹ್ವಾನದ ಹಿನ್ನೆಲೆಯಲ್ಲಿ ಯಾವುದೇ

ಕೈಗಾರಿಕೆಗಳು ಸ್ಥಳಾಂತರಗೊಳ್ಳುವುದಿಲ್ಲ ಎಂದು ಹೇಳಿದ್ದಾರೆ. ಏರೋಸ್ಪೇಸ್ ಉದ್ಯಮಗಳಿಗೆ ಭೂಮಿಯ ಜೊತೆಗೆ ನೀರು, ವಿದ್ಯುತ್ ನೀಡಲಾಗುವುದು. ರಾಜ್ಯದಲ್ಲಿ ಕೈಗಾರಿಕಾ ಪ್ರದೇಶಗಳಿಗೆ ತಮ್ಮ ಪಾಲಿನ ನೀರು ಬಳಸಿಕೊಳ್ಳಲು ೩ ಸಾವಿರದ ೬೦೦ ಕೋಟಿ ವೆಚ್ಚದಲ್ಲಿ ಸಮಗ್ರ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ಗ್ರಾಮೀಣ ಪ್ರದೇಶಗಳಲ್ಲಿ ಪರ್ಯಾಯ ಇಂಧನ ವ್ಯವಸ್ಥೆ ಪ್ರೋತ್ಸಾಹಿಸುವ ಸಲುವಾಗಿ ನೂತನ ಜೈವಿಕ ಇಂಧನ ನೀತಿ ಜಾರಿಗೆ ತರಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ನಡೆದ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಸಭೆಯ ಬಳಿಕ ಜೈವಿಕ ಇಂಧನ ನೀತಿಯ ಬಗ್ಗೆ ಮಾಹಿತಿ ನೀಡಿದ ಅವರು, ಜೈವಿಕ ಇಂಧನ ಸಂಪನ್ಮೂಲಗಳ ಲಭ್ಯತೆ, ಕ್ರೋಢಿಕರಣ ಕುರಿತು ಪರಿಶೀಲನೆ ನಡೆಸಲಾಗಿದೆ. ಕರ್ನಾಟಕ ರಾಜ್ಯ ನೂತನ ಜೈವಿಕ ಇಂಧನ ರಚನೆ ಕುರಿತು ಪ್ರಕ್ರಿಯೆ ಆರಂಭಿಸಲಾಗಿದ್ದು, ಶೀಘ್ರದಲ್ಲೇ ನೀತಿಯ ಕರಡು ಸಿದ್ಧಪಡಿಸಿ ಸಾರ್ವಜನಿಕರ ಅಭಿಪ್ರಾಯಕ್ಕಾಗಿ ಪ್ರಕಟಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

ದೇಶದಲ್ಲಿ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ಉದ್ಯೋಗ, ರಾಜಕೀಯ ಸ್ಥಿತಿ ಬಗ್ಗೆ ಸಂಪೂರ್ಣ ಗಣತಿಯಾಗಬೇಕು ಎಂದು ಬೆಂಗಳೂರಿನಲ್ಲಿ ನಡೆದ ಎಐಸಿಸಿ ಹಿಂದುಳಿದ ವರ್ಗಗಳ ರಾಷ್ಟ್ರೀಯ ಸಲಹಾ ಮಂಡಳಿ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಸ್ತುತ ಹಿಂದುಳಿದ ವರ್ಗಗಳಿಗೆ ಇರುವ ಶೇಕಡಾ ೫೦ರ ಮಿತಿಯನ್ನು ತೆಗೆದು ಶೈಕ್ಷಣಿಕ, ಆರ್ಥಿಕ ಮತ್ತು ಇತರೇ ಕ್ಷೇತ್ರಗಳಲ್ಲಿ ಶೇಕಡಾ ೭೦ಕ್ಕೆ ಹೆಚ್ಚಳ ಮಾಡುವುದು, ಜೊತೆಗೆ ಖಾಸಗಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಮೀಸಲಾತಿ ಕಲ್ಪಿಸಬೇಕೆಂದು ನಿರ್ಣಯ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ಧರಾಮಯ್ಯ (೩೦ ಸೆಕೆಂಡುಗಳು)**

<><><>

ನಗರ ಸ್ವಚ್ಛತೆಯಲ್ಲಿನ ಅತ್ಯುತ್ತಮ ಸಾಧನೆಗಳಿಗಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ನಾಳೆ ನವದೆಹಲಿಯಲ್ಲಿ ಸ್ವಚ್ಛ ಸರ್ವೇಕ್ಷಣಾ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಸ್ವಚ್ಛ ಭಾರತ ಮಿಷನ್ ಭಾಗವಾಗಿರುವ ಈ ಪ್ರಶಸ್ತಿಗಳಿಗೆ ನೈರ್ಮಲ್ಯ ಮತ್ತು ಸಾರ್ವಜನಿಕ ನೈರ್ಮಲ್ಯಕ್ಕೆ ಅಸಾಧಾರಣ ಬದ್ಧತೆಯನ್ನು ಪ್ರದರ್ಶಿಸಿದ ನಗರಗಳನ್ನು ಆಯ್ಕೆ ಮಾಡಲಾಗುತ್ತದೆ. ಪರಿಸರ ಸ್ನೇಹಿ ತ್ಯಾಜ್ಯ ನಿರ್ವಹಣೆ ಮತ್ತು ಮರುಬಳಕೆ ಹಾಗೂ ಸ್ವಚ್ಛತೆಗಾಗಿ ೨೦೨೪-೨೫ನೇ ಸಾಲಿನ ರಾಷ್ಟ್ರ ಮಟ್ಟದ ಸಚಿವಾಲಯದ ಪ್ರಶಸ್ತಿಗೆ ದಾವಣಗೆರೆ ಮಹಾನಗರ ಪಾಲಿಕೆ ಆಯ್ಕೆಗೊಂಡಿದೆ. ಸ್ವಚ್ಛ ಭಾರತ ಮಿಷನ್ ನಗರ ೧.೦ ಅನುಷ್ಠಾನಕ್ಕೆ ಅಂದಾಜು ೬೨ ಸಾವಿರದ ೯ ಕೋಟಿ ವೆಚ್ಚ ನಿಗಧಿ ಪಡಿಸಲಾಗಿತ್ತು. ಈಗಾಗಲೇ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ೧೧ ಸಾವಿರದ ೯೦೫ ಕೋಟಿಯನ್ನು ಪಡೆದಿದೆ. ಸ್ವಚ್ಛ ಭಾರತ್ ಮಿಷನ್ ನಗರ ೨.೦ನ ಒಟ್ಟು ಅನುಷ್ಠಾನ ವೆಚ್ಚ ೧ ಲಕ್ಷ ೪೧ ಸಾವಿರದ ೬೦೦ ಕೋಟಿಯನ್ನು ಅಂದಾಜಿಸಲಾಗಿದೆ. ಈಗಾಗಲೇ ವಿವಿಧ ರಾಜ್ಯಗಳಿಗೆ ೩೬ ಸಾವಿರದ ೪೬೫ ಕೋಟಿ ಹಂಚಿಕೆ ಮಾಡಲಾಗಿದೆ.

<><><>

ರಾಜ್ಯವು ಖಾದಿ ಮತ್ತು ಗ್ರಾಮೋದ್ಯೋಗ ಕ್ಷೇತ್ರದಲ್ಲಿ ರಾಷ್ಟ್ರಮಟ್ಟದಲ್ಲಿ ೧.೭ ಲಕ್ಷ ಕೋಟಿಗೂ ಅಧಿಕ ವಹಿವಾಟು ನಡೆಸಿರುವುದರ ಜೊತೆಗೆ ಸುಮಾರು ೧.೯೪ ಕೋಟಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಿರುವುದು ಹೆಮ್ಮೆಯ ಸಂಗತಿ ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಕೋಲಾರದಲ್ಲಿ ರಾಜ್ಯ ಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತುಪ್ರದರ್ಶನ ಹಾಗೂ ಮಾರಾಟ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಖಾದಿ ಬಟ್ಟೆಯ ಗುಣಮಟ್ಟ ಕಾಪಾಡುವುದರೊಂದಿಗೆ ಪರಿಣಾಮಕಾರಿ ಮಾರುಕಟ್ಟೆ ವ್ಯವಸ್ಥೆ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**ಧ್ವನಿ- ಶರಣಬಸಪ್ಪ ದರ್ಶನಾಪುರ, ಸಣ್ಣ ಕೈಗಾರಿಕೆ ಸಚಿವ (೩೦ ಸೆಕೆಂಡುಗಳು)**

<><><>

ಬೆಂಗಳೂರು ನಗರದ ಸುಪ್ರಸಿದ್ಧ ಗಾಳಿ ಆಂಜನೇಯಸ್ವಾಮಿ ದೇವಾಲಯ ಮುಜರಾಯಿ ಇಲಾಖೆ ಸುಪರ್ದಿಗೆ ಬಂದಿದೆ. ದೇವಾಲಯದ ಆಡಳಿತವನ್ನು ಸರ್ಕಾರ ತನ್ನ ಅಧೀನಕ್ಕೆ ಪಡೆದಿದ್ದು, ರಾಜ್ಯ ಸರ್ಕಾರದ ಕ್ರಮಕ್ಕೆ ತಡೆಯಾಜ್ಞೆ ನೀಡಲು ಹೈಕೋರ್ಟ್ ನಿರಾಕರಿಸಿದೆ. ದೇವಾಲಯದಲ್ಲಿ ಹಣ ದುರುಪಯೋಗದ ಆರೋಪ ಇದ್ದು ಸರ್ಕಾರದ ಕ್ರಮದಲ್ಲಿ ಮೇಲ್ನೋಟಕ್ಕೆ ಯಾವುದೇ ತಪ್ಪಿಲ್ಲ ಎಂದು ನ್ಯಾಯಮೂರ್ತಿ ಸುನಿಲ್ ಧತ್ ಯಾದವ್ ಅವರಿದ್ದ ಹೈಕೋರ್ಟ್ ಪೀಠ ಆದೇಶ ನೀಡಿದೆ.

<><><>

ಕಾಂಗ್ರೆಸ್ ಪಕ್ಷಕ್ಕೆ ಈ ದೇಶದ ಹಿಂದುಳಿದ ವರ್ಗಗಳ ಬಗ್ಗೆ, ಪರಿಶಿಷ್ಟ ಜಾತಿ, ಪಂಗಡಗಳ ಬಗ್ಗೆ, ಅಲ್ಪಸಂಖ್ಯಾತರ ಕುರಿತು ಪ್ರಾಮಾಣಿಕ ಕಾಳಜಿ ಇದೆಯೇ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡಲ್ ವರದಿಯನ್ನು ಕಾಂಗ್ರೆಸ್ ಪಕ್ಷ ಕೇಂದ್ರದಲ್ಲಿ ಅಧಿಕಾರದಲ್ಲಿ ಇದ್ದಾಗ ಅನುಷ್ಠಾನ ಮಾಡಿದೆಯೇ ಎಂದು ಕೇಳಿದ್ದಾರೆ. ಕರ್ನಾಟಕದಲ್ಲಿ ಮಾದಕ ದ್ರವ್ಯದ ವಿರುದ್ಧ ಗಂಭೀರ ಕ್ರಮ ಅಗತ್ಯ ಎಂದು ತಿಳಿಸಿದ್ದಾರೆ.

<><><>

ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ ಎಚ್. ಕೃಷ್ಣ ಇಂದು ಕೆ.ಆರ್.ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ಮೂಲ ಭೂತ ಸೌಕರ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು. ಚೆಲುವಾಂಬ ಆಸ್ಪತ್ರೆಗೆ ಭೇಟಿ ನೀಡಿ ತಾಯಿ ಹಾಗೂ ಮಕ್ಕಳಿಗೆ ನೀಡುವ ಆಹಾರ ಗುಣಮಟ್ಟ ಪರಿಶೀಲನೆ ಮಾಡಿದರು. ಆಸ್ಪತ್ರೆಯ ಶೌಚಾಲಯ, ಸ್ನಾನದ ಕೊಠಡಿ ಸ್ವಚ್ಚತೆ ಕಾಪಾಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

<><><>

ರೈತರಿಗೆ 'ಎನ್‌ಪಿಕೆ ೧೭;೧೭;೧೭' ಹೆಸರಿನಲ್ಲಿ ಕಳಪೆ ಗೊಬ್ಬರ ಮಾರಿದ್ದ ಆರೋಪದಡಿ ಹಾವೇರಿ ಜಿಲ್ಲೆ ರಾಣೆಬೆನ್ನೂರಿನ ಎರಡು ಮಳಿಗೆ ಮಾಲೀಕರು, ಗೊಬ್ಬರ ಪೂರೈಕೆದಾರರು ಹಾಗೂ ತಯಾರಕರ ವಿರುದ್ಧ ಜಿಲ್ಲಾಧಿಕಾರಿ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಿಸಲಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ. ಮಲ್ಲಿಕಾರ್ಜುನ ತಿಳಿಸಿದ್ದಾರೆ. ಕಳಪೆ ಗೊಬ್ಬರವೆಂಬುದು ಗಮನಕ್ಕೆ ಬರುತ್ತಿದ್ದಂತೆ ಮಳಿಗೆಯ ಮೇಲೆ ದಾಳಿ ಮಾಡಿ ಗೊಬ್ಬರವನ್ನು ಜಪ್ತಿ ಮಾಡಲಾಗಿತ್ತು. ಅಗತ್ಯ ವಸ್ತುಗಳ ಕಾಯ್ದೆ ೧೯೫೫ರಡಿ ಜಿಲ್ಲಾಧಿಕಾರಿ ನ್ಯಾಯಾಲಯದಲ್ಲಿ

ಪುರಾವೆಗಳ ಸಮೇತ ಮೊಕದ್ದಮೆ ಹೂಡಲಾಗಿದ್ದು, ತಪ್ಪಿತಸ್ಥರ ವಿರುದ್ಧ ವಿಚಾರಣೆ ನಡೆಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಉತ್ತರಕನ್ನಡದ ಕೊಡಸಳ್ಳಿ ಅಣೆಕಟ್ಟೆಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಭೂಕುಸಿತ ಉಂಟಾಗಿ ರಸ್ತೆಗೆ ಬಿದ್ದ ಮಣ್ಣಿನ ರಾಶಿಯನ್ನು, ಭಾರತೀಯ ಭೂವೈಜ್ಞಾನಿಕ ಸಮೀಕ್ಷೆ ಸಂಸ್ಥೆಯ ತಜ್ಞರ ಸಲಹೆ ಪಡೆದು ಕರ್ನಾಟಕ ವಿದ್ಯುತ್ ನಿಗಮದಿಂದಲೇ ತೆರವುಗೊಳಿಸಬೇಕು ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯಾ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>